**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**
**ಸಿ.ಸಿ. 6856/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ**.05
**ದಿನಾಂಕಃ** 05.02.2026 **ಸಿಡಬ್ಲ್ಯೂ**.07

| | |
|---|---|
| ಹೆಸರು | ಕೆ ವಿಜಯಕುಮಾರ |
| ತಂದೆ ಹೆಸರು | ಸುರೇಂದ್ರಚಾರಿ |
| ವಯಸ್ಸು | 50 ವರ್ಷ |
| ಉದ್ಯೋಗ | ಹೆಚ್ ಸಿ 305 |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸನ್ 2023 ರಿಂದ ಇಲ್ಲಿಯವರೆಗೆ ಹೆಚ್ ಸಿ ಆಗಿ ಹರಿಹರ ಗ್ರಾಮಾಂತರ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 26.08.2024 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಸಂಜೆ 5.30 ಗಂಟೆಗೆ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ ನಂ. 133/2024 ರಂತೆ ಪ್ರಕರಣ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪ್ರ ವ ವರದಿ ನಿವೇದಿಸಿಕೊಂಡಿದ್ದೇನೆ. ಸಾಕ್ಷಿಯು ಗುರುತಿಸಿದ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಪ್ರ ವ ವರದಿಯನ್ನು ನಿಪಿ.6 ಎಂದು ಸಾಕ್ಷಿಯ ಸಹಿಯನ್ನು ನಿಪಿ. 6 (ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.2 ಮತ್ತು 3 ರವರಿಗೆ ನೋಟಿಸ್ ನೀಡಿ ಪಂಚನಾಮೆಗೆ ಸಹಕರಿಸಲು ಕೇಳಿಕೊಂಡಿದ್ದೇವೆ. ಸಾಕ್ಷಿಯು ಗುರುತಿಸಿದ ನೋಟಿಸನ್ನು ಈಗಾಗಲೇ ನಿಪಿ.5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.5 (ಬಿ) ಎಂದು ಗುರುತಿಸಲಾಯಿತು.

ದಿಃ 27.08.2024 ರಂದು ಚಾಸಾ.2 ಮತ್ತು 3 ರವರ ಸಮಕ್ಷಮ ದೀಟೂರು ಮಹೇಶ್ವರ ದೇವಸ್ಥಾನದ ಮುಂಬಾಗದಲ್ಲಿ ಮದ್ಯಾಹ್ನ 1.00 ರಿಂದ 1.45 ರವರೆಗೆ ಕೃತ್ಯ ನಡೆದ ಪಂಚನಾಮೆ ಜರುಗಿಸಿರುತ್ತೇನೆ. ಸಾಕ್ಷಿಯು ಗುರುತಿಸಿದ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ.2 ಎಂದು

ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2 (ಡಿ) ಎಂದು ಗುರುತಿಸಲಾಯಿತು. ಸದರಿ ಕಾಲಕ್ಕೆ ಒಂದು ಕಟ್ಟಿಗೆ ಮತ್ತು ಕಲ್ಲನ್ನು ವಶಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ಕಟ್ಟಿಗೆ ಮತ್ತು ಕಲ್ಲನ್ನು ಈಗಾಗಲೇ ಕ್ರಮವಾಗಿ ಮು.ಮಾ 1 ಮತ್ತು 2 ಎಂದು ಗುರುತಿಸಲಾಗಿದೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರಗಳನ್ನು ಈಗಾಗಲೇ ನಿಪಿ.3 ಮತ್ತು 4 ಎಂದು ಗುರುತಿಸಲಾಗಿದೆ. ಜಪ್ತು ಪಡಿಸಿಕೊಂಡ ಮಾಲನ್ನು ಪಿಎಫ್ ನಂ. 84/2024 ರಡಿ ನೋಂದಾಯಿಸಿಕೊಂಡು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಅದೇ ದಿನ ಚಾಸಾ.2 ಮತ್ತು 4 ರವರ ಹೇಳಿಕೆ ಪಡೆದಿರುತ್ತೇನೆ. ಅದೇ ದಿನ ಚಾಸಾ.5 ರವರಿಂದ ಕಲಂ 63(4) ಬಾರತೀಯ ಸಾಕ್ಷ್ಯ ಅಧಿನಿಯಮ ಅಡಿ ಪ್ರಮಾಣ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಪ್ರಮಾಣ ಪತ್ರವನ್ನು ನಿಪಿ.7 ಎಂದು ಸಾಕ್ಷಿಯ ಸಹಿಯನ್ನು ನಿಪಿ. 7 (ಎ) ಎಂದು ಗುರುತಿಸಲಾಯಿತು.

ದಿಃ 15.10.2024 ರಂದು ಚಾಸಾ.6 ರವರಿಂದ ಚಾಸಾ.1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಗಾಯದ ಪ್ರಮಾಣ ಪತ್ರವನ್ನು ನಿಪಿ.8 ಎಂದು ಸಾಕ್ಷಿಯ ಸಹಿಯನ್ನು ನಿಪಿ. 8 (ಎ) ಎಂದು ಗುರುತಿಸಲಾಯಿತು.

ದಿಃ 03.11.2024 ರಂದು ಆರೋಪಿತರು ನಿರೀಕ್ಷಣಾ ಜಾಮೀನಿನ ಆದೇಶದ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ಕಡತಕ್ಕೆ ಅಳವಡಿಸಿಕೊಂಡು ಆರೋಪಿತರನ್ನು ಬಿಡುಗಡೆ ಮಾಡಿರುತ್ತೇನೆ. ನಂತರ ಆರೋಪಿತರ ವಿರುದ್ಧ ಆರೋಪ ಸಾಬೀತಾಗಿದ್ದರಿಂದ ಅವರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ಈ ದಿನ 3 ಮತ್ತು 6 ನೇ ಆರೋಪಿತರು ನ್ಯಾಯಾಲಯದಲ್ಲಿ ಇದ್ದಾರೆ. ಉಳಿದ ಆರೋಪಿತರು ಈ ದಿನ ಗೈರು ಹಾಜರಿದ್ದು ಅವರ ಗುರುತಿಸುವಿಕೆ ಬಗ್ಗೆ ಯಾವುದೇ ಆಕ್ಷೇಪಣೆ ಇಲ್ಲ ಎಂದು ಅವರ ಪರ ವಕೀಲರು ನುಡಿದಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ ಎಸ್ ಜೆ ವಕೀಲರಿಂದಃ**

ನಾನು ಪಂಚರಿಗೆ ಯಾವುದೇ ನೋಟಿಸ್ ಜಾರಿ ಮಾಡಿಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಬೇಟಿ ನೀಡಿಲ್ಲ ಯಾವುದೇ ಪಂಚನಾಮೆ ಜರುಗಿಸಿಲ್ಲ ಎಂದರೆ ಸರಿಯಲ್ಲ. ಮು.ಮಾ 1 ಮತ್ತು 2 ರಂತಹ ವಸ್ತುಗಳು ರಸ್ತೆಯ ಅಕ್ಕಪಕ್ಕ ಸಿಗುತ್ತವೆ ಎಂದರೆ ಸರಿಯಲ್ಲ. ನಾನು ಯಾವುದೇ ಗಾಯದ ಪ್ರಮಾಣ ಪತ್ರ ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ.1 ರವರು ನೀಡಿದ ಸುಳ್ಳು ದೂರನ್ನು ದಾಖಲಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಅಂಶಗಳು ಸುಳ್ಳು

ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.
sd/

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ